ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 769 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.12.2021 |
| ಉತ್ತರಿಸುವ ಸಚಿವರು | : | ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೊಡಗು ಜಿಲ್ಲೆಯಲ್ಲಿ 2021-22ನೇ ಸಾಲಿನಲ್ಲಿ ಪಡಿತರ ಚೀಟಿ ವಿತರಣೆ ಮಾಡುವಂತೆ ಕೋರಿ ಇದುವರೆಗೂ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ ಹಾಗೂ ಇದುವರೆಗೆ ಎಷ್ಟು ಪಡಿತರ ಚೀಟಿ ವಿತರಣೆ ಮಾಡಲಾಗಿದೆ; | ಕೊಡಗು ಜಿಲ್ಲೆಯಲ್ಲಿ 2021-22 ನೇ ಸಾಲಿನಲ್ಲಿ ಪಡಿತರ ಚೀಟಿಯನ್ನು ಕೋರಿ 3110 ಅರ್ಜಿಗಳು ಸ್ವೀಕೃತವಾಗಿದ್ದು, 01 ಪಡಿತರ ಚೀಟಿಯನ್ನು ವಿತರಿಸಲಾಗಿದೆ. |
| (ಆ) | ಜಿಲ್ಲೆಯಲ್ಲಿ ಪಡಿತರ ಚೀಟಿ ವಿತರಣೆ ಆಗದೇ ಬಾಕಿ ಇರುವ ಅರ್ಜಿಗಳಷ್ಟು ಹಾಗೂ ಪಡಿತರ ಚೀಟಿ ವಿತರಣೆಯಲ್ಲಿ ಅನಗತ್ಯ ವಿಳಂಬವಾಗುತ್ತಿರಲು ಕಾರಣಗಳೇನು; | ಕೊಡಗು ಜಿಲ್ಲೆಯಲ್ಲಿ ಪಡಿತರ ಚೀಟಿ ಕೋರಿ ಸಲ್ಲಿಸಲಾಗಿರುವ ಅರ್ಜಿಗಳಲ್ಲಿ 3109 ಅರ್ಜಿಗಳು ವಿತರಣೆಗೆ ಬಾಕಿ ಉಳಿದಿವೆ.<br><br>ಕೋವಿಡ್-19 ಲಾಕ್‌ಡೌನ್ ಅವಧಿಯಲ್ಲಿ ಹೊಸ ಪಡಿತರ ಚೀಟಿ ಕೋರಿ ಸಲ್ಲಿಸಿರುವ ಅರ್ಜಿಗಳ ಸ್ಥಳ ಪರಿಶೀಲನೆ ಕಾರ್ಯವು ನಿಧಾನವಾಗಿದ್ದು ಮತ್ತು ಈ ಅವಧಿಯಲ್ಲಿ ಬಯೋಮೆಟ್ರಿಕ್ ಬಳಕೆಯನ್ನು ಹಿಂಪಡೆದಿರುವ ಕಾರಣ ಪಡಿತರ ಚೀಟಿಗಳನ್ನು ವಿತರಿಸುವ ಕಾರ್ಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. |
| (ಇ) | ಬಾಕಿ ಇರುವ ಅರ್ಜಿಗಳನ್ನು ಯಾವ ಕಾಲಮಿತಿಯೊಳಗೆ ವಿಲೇವಾರಿ ಮಾಡಲಾಗುವುದು; | ಕೋವಿಡ್-19 ಲಾಕ್‌ಡೌನ್ ಅವಧಿಯಲ್ಲಿ ಹೊಸ ಪಡಿತರ ಚೀಟಿ ಕೋರಿ ಸಲ್ಲಿಸಿರುವ ಅರ್ಜಿಗಳ ಸ್ಥಳ ಪರಿಶೀಲನೆ ಕಾರ್ಯವು ನಿಧಾನವಾಗಿದ್ದು ಮತ್ತು ಈ ಅವಧಿಯಲ್ಲಿ ಬಯೋಮೆಟ್ರಿಕ್ ಬಳಕೆಯನ್ನು ಹಿಂಪಡೆದಿರುವ ಕಾರಣ ಪಡಿತರ ಚೀಟಿಗಳನ್ನು ವಿತರಿಸುವ ಕಾರ್ಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. |
| (ಈ) | ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ನ್ಯಾಯಬೆಲೆ ಅಂಗಡಿಗಳ ಮೂಲಕ ಒಟ್ಟು ಎಷ್ಟು ಕುಟುಂಬಗಳಿಗೆ ಎಷ್ಟು ಮೊತ್ತದ | ಕೊಡಗು ಜಿಲ್ಲೆಯಲ್ಲಿ ಒಟ್ಟು 276 ನ್ಯಾಯಬೆಲೆ ಅಂಗಡಿಗಳ ಮೂಲಕ ಒಟ್ಟು 105701 ಅನ್ನಭಾಗ್ಯ ಕುಟುಂಬಗಳಿಗೆ ಪಡಿತರ |

| | | |
|---|---|---|
| | ಪಡಿತರ ವಿತರಣೆಯಾಗುತ್ತಿದೆ? (ವಿವರ ನೀಡುವುದು) | ವಿತರಣೆ ಮಾಡಲಾಗುತ್ತಿದೆ. ಕೊಡಗು ಜಿಲ್ಲೆಯಲ್ಲಿ ಒಟ್ಟು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಅಡಿ 17994.20 ಕ್ವಿಂಟಾಲ್ ಅಕ್ಕಿ ಮತ್ತು 1911.48 ಕ್ವಿಂಟಾಲ್ ಗೋಧಿಯನ್ನು ವಿತರಿಸಲಾಗುತ್ತಿದೆ. ಹಾಗೂ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿ 16131.30 ಕ್ವಿಂಟಾಲ್ ಅಕ್ಕಿ ವಿತರಣೆಯಾಗುತ್ತಿದೆ. |

ಆನಾಸ 307 ಡಿಆರ್‌ಎ 2021 (ಇ-ಆಫೀಸ್)

(ಉಮೇಶ.ವಿ.ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ
ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು